# ರಷ್ಯಾ ಒಕ್ಕೂಟ ಮತ್ತು ಆಸ್ಟ್ರಿಯಾ ಗಣರಾಜ್ಯ ಭೇಟಿಗೂ ಮುನ್ನ ಪ್ರಧಾನಮಂತ್ರಿಗಳ ನಿರ್ಗಮನ ಹೇಳಿಕೆ

ಜುಲೈ 08, 2024

22ನೇ ವಾರ್ಷಿಕ ಶೃಂಗಸಭೆಯಲ್ಲಿ ಪಾಲ್ಗೊಳ್ಳುವ ಸಲುವಾಗಿ ನಾನು ಇಂದು ರಷ್ಯಾ ಒಕ್ಕೂಟಕ್ಕೆ ಅಧಿಕೃತ ಪ್ರವಾಸ ಕೈಗೊಳ್ಳುತ್ತಿದ್ದೇನೆ. ಅಲ್ಲದೆ, ಮುಂದಿನ ಮೂರು ದಿನಗಳ ಕಾಲ ಆಸ್ಟ್ರಿಯಾ ಗಣರಾಜ್ಯಕ್ಕೂ ನಾನು ಮೊತ್ತಮೊದಲ ಬಾರಿಗೆ ಭೇಟಿ ನೀಡುತ್ತಿದ್ದೇನೆ.

ಇಂಧನ, ಭದ್ರತೆ, ವ್ಯಾಪಾರ, ಹೂಡಿಕೆ, ಆರೋಗ್ಯ, ಶಿಕ್ಷಣ, ಸಂಸ್ಕೃತಿ, ಪ್ರವಾಸೋದ್ಯಮ ಮತ್ತು ಜನರ ನಡುವಿನ ವಿನಿಮಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಭಾರತ ಮತ್ತು ರಷ್ಯಾ ನಡುವಿನ ವಿಶೇಷ ಮತ್ತು ಗೌರವಾನ್ವಿತ ವ್ಯೂಹಾತ್ಮಕ ಪಾಲುದಾರಿಕೆಯು ಕಳೆದ ಹತ್ತು ವರ್ಷಗಳಲ್ಲಿ ಮತ್ತಷ್ಟು ಸುಧಾರಿಸಿದೆ.
ನನ್ನ ಸ್ನೇಹಿತ ಹಾಗೂ ಅಧ್ಯಕ್ಷರಾದ ವ್ಲಾದಿಮಿರ್ ಪುಟಿನ್ ಅವರೊಂದಿಗೆ ದ್ವಿಪಕ್ಷೀಯ ಸಹಕಾರದ ಎಲ್ಲ ಅಂಶಗಳನ್ನೂ ಪರಿಶೀಲಿಸಲು ಮತ್ತು ವಿವಿಧ ಪ್ರಾದೇಶಿಕ ಹಾಗೂ ಜಾಗತಿಕ ವಿಚಾರಗಳ ಬಗ್ಗೆ ನಮ್ಮ ದೃಷ್ಟಿಕೋನಗಳನ್ನು ಹಂಚಿಕೊಳ್ಳಲು ನಾನು ಎದುರುನೋಡುತ್ತಿದ್ದೇನೆ. ಈ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಬೆಂಬಲ ನೀಡುವಂಥ ಪಾತ್ರವನ್ನು ನಾವು ನಿಭಾಯಿಸಲಿದ್ದೇವೆ. ಈ ಪ್ರವಾಸವು ನನಗೆ ರಷ್ಯಾದಲ್ಲಿರುವ ಭಾರತೀಯ ಸಮುದಾಯವನ್ನು ಭೇಟಿಯಾಗುವ ಅವಕಾಶವನ್ನೂ ಒದಗಿಸಿದೆ.

ಇನ್ನು ಆಸ್ಟ್ರಿಯಾದಲ್ಲಿ, ನನಗೆ ಅಧ್ಯಕ್ಷರಾದ ಅಲೆಕ್ಸಾಂಡರ್ ವ್ಯಾನ್ ಡೆರ್ ಬೆಲ್ಲೆನ್ ಮತ್ತು ಚಾನ್ಸೆಲರ್ ಕಾರ್ಲ್ ನೆಹಾಮ್ಮೆರ್ ಅವರನ್ನು ಭೇಟಿಯಾಗುವ ಅವಕಾಶ ದೊರೆಯಲಿದೆ. ಆಸ್ಟ್ರಿಯಾವು ನಮ್ಮ ಸ್ಥಿರ ಮತ್ತು ವಿಶ್ವಾಸಾರ್ಹ ಪಾಲುದಾರನಾಗಿದ್ದು, ನಾವು ಪ್ರಜಾಪ್ರಭುತ್ವ ಮತ್ತು ಬಹುತ್ವದ ಆದರ್ಶಗಳನ್ನು ಹಂಚಿಕೊಳ್ಳುತ್ತೇವೆ.
ಕಳೆದ 40 ವರ್ಷಗಳಲ್ಲೇ ಭಾರತದ ಪ್ರಧಾನಿಯೊಬ್ಬರ ಮೊದಲ ಭೇಟಿ ಇದಾಗಿದೆ. ನಮ್ಮ ನಡುವಿನ ಚರ್ಚೆಯು ನಾವೀನ್ಯತೆ, ತಂತ್ರಜ್ಞಾನ ಮತ್ತು ಸುಸ್ಥಿರ ಅಭಿವೃದ್ಧಿ ಸೇರಿದಂತೆ ಹೊಸ ಮತ್ತು ಉದಯೋನ್ಮುಖ ಕ್ಷೇತ್ರಗಳಲ್ಲಿ ನಮ್ಮ ಪಾಲುದಾರಿಕೆಯನ್ನು ಮತ್ತಷ್ಟು ಎತ್ತರಕ್ಕೆ ಏರಿಸಲಿ ಎಂದು ನಾನು ಬಯಸುತ್ತೇನೆ. ಆಸ್ಟ್ರಿಯಾದ ಪ್ರಧಾನಿಗಳೊಂದಿಗೆ, ನಾನು ಉಭಯ ದೇಶಗಳ ಉದ್ದಿಮೆ ನಾಯಕರೊಂದಿಗೆ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದು, ಈ ಮೂಲಕ ಪರಸ್ಪರರಿಗೆ ಅನುಕೂಲವಾಗುವಂಥ ವ್ಯಾಪಾರ ಮತ್ತು ಹೂಡಿಕೆ ಅವಕಾಶಗಳನ್ನು ಅನ್ವೇಷಿಸಲು ಎದುರು ನೋಡುತ್ತಿದ್ದೇನೆ. ತಮ್ಮ ವೃತ್ತಿಪರತೆ ಮತ್ತು ನಡವಳಿಕೆಗಳಿಂದ ಗೌರವಾದರಗಳನ್ನು ಗಳಿಸಿರುವ ಆಸ್ಟ್ರಿಯಾದಲ್ಲಿರುವ ಭಾರತೀಯ ಸಮುದಾಯದೊಂದಿಗೂ ನಾವು ಸಂವಾದ ನಡೆಸಲಿದ್ದೇನೆ.

ನವದೆಹಲಿ

**ಜುಲೈ 08, 2024**